# ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ : ಕೇಂದ್ರ ಕಛೇರಿ : ಬೆಂಗಳೂರು-27

ಸಂ:ಕರಾಸಾ:ಕೇಕ:ಸಂ:ಸಿ2:1074ಎ:1565:2021-22: ದಿನಾಂಕ:2.12.2021

## ಸುತ್ತೋಲೆ ಸಂಖ್ಯೆ: 1660/2021

**(ಸಂಚಾರ (ವಾಣಿಜ್ಯ) ಇಲಾಖೆಯಿಂದ ಹೊರಡಿಸಲ್ಪಟ್ಟಿದೆ)**

**ವಿಷಯ:** 2022ನೇ ಸಾಲಿಗೆ ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸ್ ವಿತರಿಸುವ ಬಗ್ಗೆ.

**ಉಲ್ಲೇಖ:** 1. ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ:779/2016, ದಿ:20.12.2016.
2. ಸಂ:ಕರಾಸಾ:ಕೇಕ:ಸಂ:ವಾ:ಸಿ2:1187:2019-20 ದಿನಾಂಕ: 17.09.2019.
3. ಸುತ್ತೋಲೆ ಸಂಖ್ಯೆ 1564/2020, ದಿನಾಂಕ: 10.06.2020
4. ಸುತ್ತೋಲೆ ಸಂಖ್ಯೆ 1582/2020, ದಿನಾಂಕ: 01.12.2020

******

ರಾಜ್ಯ ರಸ್ತೆ ಸಾರಿಗೆ ನಿಗಮಗಳು ಸಾಮಾಜಿಕ ಹೊಣೆಗಾರಿಕೆಯಡಿಯಲ್ಲಿ ಸರ್ಕಾರದ ನಿರ್ದೇಶನದಂತೆ ಅರ್ಜಿ ಸಲ್ಲಿಸುವ ವಿಕಲಚೇತನ ಫಲಾನುಭವಿಗಳಿಗೆ ರಿಯಾಯಿತಿ ಬಸ್‌ಪಾಸ್‌ಗಳನ್ನು ವಿತರಿಸುತ್ತಿವೆ.

ಪ್ರಸ್ತುತ 2022ನೇ ಸಾಲಿಗಾಗಿ 01.01.2022 ರಿಂದ 31.12.2022 ರವರೆಗೆ ಮಾನ್ಯತೆ ಇರುವಂತೆ ವಿಕಲಚೇತನರಿಗೆ ಬಸ್ ಪಾಸ್ ವಿತರಿಸಬೇಕಿರುತ್ತದೆ. ಈ ಸಂಬಂಧ ಉಲ್ಲೇಖ-1&2 ರ ಆದೇಶಗಳಲ್ಲಿನ ನಿರ್ದೇಶನಗಳನ್ನು ಅನುಸರಿಸುವುದರ ಜೊತೆಗೆ ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಅನುಸರಿಸಿ ಬಸ್ ಪಾಸ್ ವಿತರಿಸಲು ಕ್ರಮಕೈಗೊಳ್ಳುವುದು.

1. ವಿಕಲಚೇತನರ ರಿಯಾಯಿತಿ ಬಸ್‌ಪಾಸ್‌ಗಳನ್ನು ಫಲಾನುಭವಿಗಳು ಸೇವಾಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿ, ನವೀಕರಿಸಿಕೊಳ್ಳಲು ಅನುಕೂಲವಾಗುವಂತೆ ಸಾಕಷ್ಟು ಕಾಲಾವಕಾಶ ನೀಡುವ ಉದ್ದೇಶದಿಂದ, **2021ನೇ ಸಾಲಿನಲ್ಲಿ ವಿತರಿಸಲಾಗಿರುವ ಮತ್ತು ದಿನಾಂಕ 31.12.2021 ರವರೆಗೆ ಮಾನ್ಯತೆ ಇರುವ, ವಿಕಲಚೇತನರ ಪಾಸ್‌ಗಳನ್ನು, ದಿನಾಂಕ 28.02.2022 ರವರೆಗೆ ಮಾನ್ಯ ಮಾಡುವುದು.**
2. 2022ನೇ ಸಾಲಿನ ವಿಕಲಚೇತನರ ಹೊಸ ಬಸ್‌ಪಾಸ್‌ಗಳನ್ನು ದಿನಾಂಕ: 17.01.2022 ರಿಂದ ವಿತರಿಸಲು ಹಾಗೂ ಹಳೆಯ ಪಾಸ್‌ಗಳನ್ನು ನವೀಕರಿಸಲು ಕ್ರಮವಹಿಸುವುದು.
3. 2022ನೇ ಸಾಲಿನ ಪಾಸುಗಳ ನವೀಕರಣ ಮತ್ತು ನೂತನ ಪಾಸುಗಳಿಗೆ, ರೂ.660/- ಶುಲ್ಕ ನಿಗದಿಪಡಿಸಲಾಗಿದೆ. ಇದನ್ನು ನಗದಾಗಿ ಅಥವಾ ಡಿ.ಡಿ ರೂಪದಲ್ಲಿ ಪಾವತಿಸಿಕೊಳ್ಳುವುದು.
4. ಹಾಲಿ ಪಾಸುಗಳ ನವೀಕರಣಕ್ಕಾಗಿ ದಿನಾಂಕ: 28.02.2022 ರವರೆಗೆ ಅವಕಾಶ ಕಲ್ಪಿಸಲಾಗಿದೆ.
5. ಸದರಿ ದಿನಾಂಕದ ನಂತರ ನವೀಕರಣಕ್ಕೆ ಬರುವ ಫಲಾನುಭವಿಗಳಿಗೆ ನೂತನ ಪಾಸು ವಿತರಣೆ ಮಾದರಿಯಲ್ಲಿ ಅಗತ್ಯ ದಾಖಲಾತಿಗಳನ್ನು ಪಡೆದು ಪಾಸು ವಿತರಿಸುವುದು. ನೂತನ ಪಾಸು ವಿತರಣೆಗೆ ನಿರ್ದಿಷ್ಟ ಕಾಲಮಿತಿಯಿರುವುದಿಲ್ಲ.
6. ವಿಕಲಚೇತನರ ಬಸ್‌ಪಾಸ್ ನವೀಕರಣ ಹಾಗೂ ನೂತನ ಬಸ್‌ಪಾಸ್ ವಿತರಣೆಯ ಬಗ್ಗೆ ಸ್ಥಳೀಯ ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಿ ಅಗತ್ಯ ಪ್ರಚಾರ ನೀಡುವುದು.
7. 2022ನೇ ಸಾಲಿನ ವಿಕಲಚೇತನರ ಬಸ್ ಪಾಸ್ ವಿತರಣೆ / ನವೀಕರಣಕ್ಕೆ ಉಲ್ಲೇಖ-3 & 4 ರ ಸುತ್ತೋಲೆ / ನಿರ್ದೇಶನಗಳಂತೆ ಸೇವಾಸಿಂಧು ಪೋರ್ಟಲ್‌ನಲ್ಲಿ ದಾಖಲಿಸಲು ಕ್ರಮವಹಿಸುವುದು.
8. ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿಗಳನ್ನು ಸಲ್ಲಿಸುವ ಸಂಬಂಧ ವಿಭಾಗ ವ್ಯಾಪ್ತಿಯಲ್ಲಿ ಪತ್ರಿಕಾ ಪ್ರಕಟಣೆ ನೀಡುವುದು, ಬಸ್ ನಿಲ್ದಾಣದ ಮತ್ತು ಘಟಕದ ಅಯಕಟ್ಟಿನ ಸ್ಥಳದಲ್ಲಿ ಬ್ಯಾನರ್‌ಗಳನ್ನು ಪ್ರದರ್ಶಿಸುವ ವ್ಯವಸ್ಥೆ ಮಾಡುವುದು, ಬಸ್ ನಿಲ್ದಾಣಗಳಲ್ಲಿ (ಸಾರ್ವಜನಿಕ ಉದ್ಘೋಷಣಾ ವ್ಯವಸ್ಥೆ) PAS ಮುಖಾಂತರ ಪ್ರಚಾರ ಮಾಡಲು ಕ್ರಮಕೈಗೊಳ್ಳುವುದು.
9. 2021ನೇ ಸಾಲಿನಲ್ಲಿ ವಿತರಿಸಲಾಗಿರುವ ವಿಕಲಚೇತನರ ಪಾಸುಗಳ ನವೀಕರಣಕ್ಕಾಗಿ ದಿನಾಂಕ: 28.02.2022 ರವರೆಗೆ ಅವಕಾಶ ಕಲ್ಪಿಸಿರುವ ಬಗ್ಗೆ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಮಾಹಿತಿ ನೀಡುವುದು ಹಾಗೂ ಯಾವುದೇ ದೂರುಗಳಿಗೆ ಆಸ್ಪದ ನೀಡದಂತೆ ಕ್ರಮವಹಿಸುವುದು. ಸದರಿ ಪಾಸುಗಳನ್ನು ಅನುಮತಿಸದೇ ದೂರುಗಳಿಗೆ ಕಾರಣವಾಗುವ ಚಾಲನಾ ಸಿಬ್ಬಂದಿಗಳ ವಿರುದ್ಧ ಸೂಕ್ತ ಶಿಸ್ತು ಕ್ರಮಕೈಗೊಳ್ಳುವುದು.

### I. ವಿಕಲಚೇತನರ ರಿಯಾಯಿತಿ ಬಸ್ ಪಾಸ್‌ಗಾಗಿ ಅರ್ಜಿ ಸಲ್ಲಿಸುವಿಕೆ:

#### ಎ. ಆನ್‌ಲೈನ್ (ಸೇವಾಸಿಂಧು ಪೋರ್ಟಲ್ ಮುಖಾಂತರ):

1. 2021ನೇ ಸಾಲಿನಂತೆ 2022ನೇ ಸಾಲಿನಲ್ಲಿಯೂ ಹೊಸದಾಗಿ / ನವೀಕರಣದ ವಿಕಲಚೇತನರ ರಿಯಾಯಿತಿ ಬಸ್‌ಪಾಸ್‌ಗಾಗಿ ಆನ್‌ಲೈನ್‌ನಲ್ಲಿ ಸರ್ಕಾರ ನಿಗದಿಪಡಿಸಿರುವ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.
2. ವಿಕಲಚೇತನ ಅರ್ಜಿದಾರರು ಆನ್‌ಲೈನ್‌ನಲ್ಲಿ ತಮ್ಮ ವಿವರಗಳನ್ನು ಭರ್ತಿಗೊಳಿಸಿ, ಅಗತ್ಯ ದಾಖಲೆಗಳನ್ನು JPG ಅಥವಾ PDF ನಮೂನೆಯಲ್ಲಿ ಆನ್‌ಲೈನ್‌ನಲ್ಲಿ ಅಡಕಗೊಳಿಸುವುದು.
3. **ವಿಕಲಚೇತನರ ರಿಯಾಯಿತಿ ಬಸ್ ಪಾಸ್ ನವೀಕರಿಸಿಕೊಳ್ಳುವವರು ಕರಾರಸಾ ನಿಗಮದ ಬಸ್ ನಿಲ್ದಾಣದ ಪಾಸ್ ಕೌಂಟರ್‌ಗಳಲ್ಲಿ ಹಾಗೂ ಹೊಸದಾಗಿ ಪಾಸು ಪಡೆಯುವವರು ವಿಭಾಗೀಯ ಕಛೇರಿಯಲ್ಲಿ ಹಣ ಪಾವತಿಸಲು ಅವಕಾಶವಿರುತ್ತದೆ.**

. . . 2

**II. <u>ಪಾಸ್ ವಿತರಣಾ ಸಿಬ್ಬಂದಿಯವರ ಕರ್ತವ್ಯಗಳು :</u>**

1. ಪಾಸು ವಿತರಣಾ ಸಿಬ್ಬಂದಿಗಳು ಘಟಕ ವ್ಯವಸ್ಥಾಪಕರ / ವಿಭಾಗೀಯ ನಿಯಂತ್ರಣಾಧಿಕಾರಿಗಳ ಪರವಾಗಿ ದಾಖಲಾತಿಗಳನ್ನು ಆನ್‌ಲೈನ್‌ನಲ್ಲಿ ಪರಿಶೀಲಿಸಿ, ಅರ್ಜಿಗಳನ್ನು ಅನುಮೋದಿಸುವುದು. ಅರ್ಜಿಗೆ ಸಂಬಂಧಿಸಿದ ಮಾಹಿತಿಯು ಎಸ್.ಎಂ.ಎಸ್ ಮೂಲಕ ಅರ್ಜಿದಾರರಿಗೆ ರವಾನೆಗೊಳ್ಳುವ ವ್ಯವಸ್ಥೆ ಇರುತ್ತದೆ.
2. ಅರ್ಜಿ ಸಂಖ್ಯೆ ಆಯ್ಕೆ ಮಾಡಿ view processing history ಮೇಲೆ ಕ್ಲಿಕ್ ಮಾಡಿದಾಗ, ಸಂಪೂರ್ಣ ಅರ್ಜಿಯ ವಿವರ ಮತ್ತು ಅಡಕಗಳನ್ನು ಪರಿಶೀಲಿಸಬಹುದು.
3. ಪಾಸು ವಿತರಣೆಗೆ ಸಂಬಂಧಿಸಿದ ಭೌತಿಕ ದಾಖಲಾತಿಗಳನ್ನು ಕಡ್ಡಾಯವಾಗಿ ಪಡೆಯುವುದು.
4. ವಿತರಣಾ ಸಿಬ್ಬಂದಿಗಳು Divisional Controller ಗೆ ಲಾಗಿನ್ ಮಾಡಿ, Message Box ಗೆ ಹೋಗಿ Inbox ನ್ನು ಆಯ್ಕೆ ಮಾಡುವುದು.
5. ಆನ್‌ಲೈನ್ ಅರ್ಜಿಗಳು ಎಲ್ಲಾ ರೀತಿಯಿಂದ ಸಮರ್ಪಕವಾಗಿದ್ದಲ್ಲಿ, Deliver option ದಾಖಲಿಸುವುದು ಮತ್ತು ಹಿಂದಿನಂತೆ ಪಾಸು ವಿತರಿಸಲು ಈ ಹಿಂದೆ ಅನುಸರಿಸುತ್ತಿದ್ದ ಕ್ರಮಗಳನ್ನೇ ಅನುಸರಿಸುವುದು.
6. ಪ್ರತಿ ವಿಭಾಗದ ಪಾಸು ಶಾಖೆಯವರು ಪಾಸು ವಿತರಣೆಯ ಎಂ.ಐ.ಎಸ್ ವರದಿಗಳನ್ನು ಸಕಾಲದಲ್ಲಿ ಪಡೆದುಕೊಂಡು, ದೃಢೀಕರಿಸಿ ದಾಖಲೆಗಳನ್ನು ನಿರ್ವಹಿಸುವುದು.

**III. <u>ಗಣಕ ಇಲಾಖೆಯವರ ಕರ್ತವ್ಯಗಳು:</u>**

1. ಸೇವಾಸಿಂಧು ಯೋಜನೆಯಡಿ ವಿತರಿಸುವ ವಿಕಲಚೇತನರ ರಿಯಾಯಿತಿ ಪಾಸುಗಳ ವರದಿಗಳನ್ನು ಅಭಿವೃದ್ಧಿಪಡಿಸುವ ಸಂಬಂಧ ಸಂಬಂಧಿಸಿದ ಇಲಾಖೆಯೊಂದಿಗೆ ಸಮನ್ವಯಿಸುವುದು.
2. 2021ನೇ ಸಾಲಿನಂತೆ ಯಾವುದೇ ತೊಡಕುಗಳಿಲ್ಲದೆ ಸೇವಾಸಿಂಧು ಪೋರ್ಟಲ್ ನಲ್ಲಿ ಅನುಷ್ಠಾನಗೊಳಿಸುವ ಸಂಬಂಧ ಹಾಗೂ ಎಂಐಎಸ್ ವರದಿಗಳು ಲಭ್ಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.
3. ವಿಭಾಗಗಳ ಸೇವಾಸಿಂಧು ನೋಡೆಲ್ ಅಧಿಕಾರಿಗಳಿಗೆ ಸೇವಾಸಿಂಧು ಪೋರ್ಟಲ್ ಬಳಕೆ ಸಂಬಂಧ ಅಗತ್ಯ ಮಾಹಿತಿ / ತರಬೇತಿ / ನಿರ್ದೇಶನ ನೀಡುವುದು.

ಇನ್ನುಳಿದಂತೆ ಉಲ್ಲೇಖಿತ ಸಾಮಾನ್ಯ ಸ್ಥಾಯಿ ಆದೇಶದಲ್ಲಿನ ಅಂಶಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ಸುತ್ತೋಲೆ ಸ್ವೀಕರಿಸಿ ಜಾರಿಗೊಳಿಸಿದ ಬಗ್ಗೆ ಈ ಕಛೇರಿಗೆ ಅನುಸರಣಾ ವರದಿ ಸಲ್ಲಿಸಲು ತಿಳಿಸಲಾಗಿದೆ.

(ಶಿವಯೋಗಿ ಸಿ. ಕಳಸದ, ಭಾ.ಆ.ಸೇ)
ವ್ಯವಸ್ಥಾಪಕ ನಿರ್ದೇಶಕರು
ಕರಾರಸಾ ನಿಗಮ

✓<u>ಪ್ರತಿಯನ್ನು:</u>

1) ಮಾನ್ಯ ಅಧ್ಯಕ್ಷರು / ಮಾನ್ಯ ಉಪಾಧ್ಯಕ್ಷರು /ವ್ಯವಸ್ಥಾಪಕ ನಿರ್ದೇಶಕರ ಹಿರಿಯ / ಆಪ್ತ ಕಾರ್ಯದರ್ಶಿಗಳು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2) ನಿರ್ದೇಶಕರು, ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ ಗೋಪುರ, ಬೆಂಗಳೂರು ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
3) ಸರ್ಕಾರದ ಉಪ ಕಾರ್ಯದರ್ಶಿಗಳು, ಸಾರಿಗೆ ಇಲಾಖೆ, ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು–560 001 ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
4) ನಿರ್ದೇಶಕರು (ಸಿ&ಪ) / (ಭ&ಜಾ), ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
5) ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ / ವಾಕರಸಾ ಸಂಸ್ಥೆ / ಕಕರಸಾ ನಿಗಮ, ಕೇಂದ್ರ ಕಛೇರಿ, ಬೆಂಗಳೂರು / ಹುಬ್ಬಳ್ಳಿ / ಕಲಬುರ್ಗಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
6) ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
7) ಮುದ್ರಣ ಮತ್ತು ಲೇಖನಾ ಸಾಮಗ್ರಿ ನಿಯಂತ್ರಣಾಧಿಕಾರಿಗಳು, ಕ.ರಾ.ಸಾ ಮುದ್ರಣಾಲಯ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
8) ಹಿರಿಯ / ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು / ವಿಭಾಗೀಯ ಸಂಚಲನಾಧಿಕಾರಿಗಳು ಕ.ರಾ.ರ.ಸಾ. ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ಕರಾರಸಾ ನಿಗಮ

ಟ್ರಾಫಿಕ್